FEBRUARY 07, 2025

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು

<><><>

- ಬಡತನ ನಿರ್ಮೂಲನೆಯಿಂದ, ಬಾಲ್ಯ ವಿವಾಹ ಪಿಡುಗಿನ ಮೂಲೋತ್ಪಾಟನೆ ಸಾಧ್ಯ; ರಾಜ್ಯ ಮಹಿಳಾ ಆಯೋಗ.
- ರಾಜ್ಯದ ಅಲೆಮಾರಿ ಜನಾಂಗಗಳ ಸ್ಥಿತಿ, ಗತಿ; ಮಾರ್ಚ್ 12ರೊಳಗೆ ನಿಗಮದಿಂದ, ಅಧ್ಯಯನ ವರದಿ ಸಲ್ಲಿಕೆ.
- ಮುಂಬೈ 'ಸೀ ಸ್ಕೌಟಿಂಗ್ ಕೇಂದ್ರ'ವನ್ನು, ಮಂಗಳೂರಿಗೆ ಸ್ಥಳಾಂತರಿಸಲು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಚಿಂತನೆ.
- ಉತ್ತರಕನ್ನಡ ಜಿಲ್ಲೆ ಶಿರೂರಿನಲ್ಲಿ, ಪುನಃ ಮಳೆಗಾಲದಲ್ಲಿ ಗುಡ್ಡ ಕುಸಿಯದಂತೆ, ಜಿಲ್ಲಾಡಳಿತದಿಂದ ಕ್ರಮ.

<><><>

ಈಗ ವಾರ್ತೆಗಳ ವಿವರ

<><><>

ಉಪ ರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಇಂದು ರಾಜ್ಯಕ್ಕೆ ಒಂದು ದಿನದ ಮಟ್ಟಿಗೆ, ಭೇಟಿ ನೀಡಲಿದ್ದಾರೆ. ಹಾವೇರಿ ಜಿಲ್ಲೆ, ರಾಣಿಬೆನ್ನೂರಿಗೆ ಭೇಟಿ ನೀಡಲಿದ್ದು, ಕರ್ನಾಟಕ ವೈಭವ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವದ ಉದ್ಘಾಟನಾ ಸಮಾರಂಭದಲ್ಲಿ, ಅಥಿತಿಯಾಗಿ ಪಾಲ್ಗೊಳ್ಳಲಿದ್ದಾರೆ.

<><><>

ಬಡತನ ನಿರ್ಮೂಲನೆ ಸಾಧ್ಯವಾದರೆ, ಬಾಲ್ಯ ವಿವಾಹದ ಪಿಡುಗನ್ನು ಮೂಲೋತ್ಪಾಟನೆ ಮಾಡಲು ಸಾಧ್ಯ ಎಂದು, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ, ಹೇಳಿದ್ದಾರೆ. ಚಿತ್ರದುರ್ಗ ಜಿಲ್ಲಾಧಿಕಾರಿ ಕಚೇರಿಯಲ್ಲಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಡತನದಲ್ಲಿ ಹೆಣ್ಣು ಮಕ್ಕಳನ್ನು ಪೋಷಿಸುವುದು ಮತ್ತು ಶಿಕ್ಷಣ ಕೊಡಿಸುವುದು ಕಷ್ಟ ಸಾಧ್ಯ. ಹೀಗಾಗಿ, ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಏರುಗತಿಯಲ್ಲಿವೆ. ಗ್ರಾಮ ಪಂಚಾಯ್ತಿ ಮಟ್ಟದ ಅಧಿಕಾರಿಯಿಂದ ಹಿಡಿದು, ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮನ್ವಯ ಮತ್ತು ಸಹಕಾರದಿಂದ ಕೆಲಸ ಮಾಡಿದರೆ, ಮಕ್ಕಳ ಬಾಲ್ಯ ರಕ್ಷಿಸಬಹುದು ಎಂದರು.

<><><>

ರಾಜ್ಯದ 15 ಜಿಲ್ಲೆಗಳ ಪ್ರವಾಸ ಪೂರ್ಣಗೊಂಡಿದ್ದು, ಬಾಕಿ 16 ಜಿಲ್ಲೆಗಳ ಪ್ರವಾಸವನ್ನು, ಶೀಘ್ರ ಮುಗಿಸಿ, ಅಲೆಮಾರಿ ಜನಾಂಗಗಳ ಸ್ಥಿತಿ, ಗತಿ ಹಾಗೂ ಕುಂದುಕೊರತೆಗಳ ನಿವಾರಣೆ ಬಗ್ಗೆ, ಮಾರ್ಚ್ 12 ರೊಳಗೆ ವರದಿ ಸಲ್ಲಿಸುವುದಾಗಿ, ರಾಜ್ಯದ ಪರಿಶಿ ್ಟ ಜಾತಿ ಮತ್ತು ಪರಿಶಿ ್ಟ ಪಂಗಡಗಳ, ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ, ಜಿ. ಪಲ್ಲವಿ ತಿಳಿಸಿದ್ದಾರೆ. ಹಾವೇರಿ ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ, ಅಲೆಮಾರಿ ಸಮುದಾಯಗಳ ಅಭಿವೃದ್ಧಿ ಯೋಜನೆಗಳ ಕುರಿತ, ಪ್ರಗತಿ ಪರಿಶೀಲನಾ ಸಭೆ ನಡೆಸಿದರು. 'ಟೆಂಟ್ ಮುಕ್ತ ಕರ್ನಾಟಕ' ನಿರ್ಮಿಸುವ ಗುರಿಯೊಂದಿಗೆ, ಧ್ವನಿ ಇಲ್ಲದ, ಅವಕಾಶ ವಂಚಿತ ಅಲೆಮಾರಿಗಳ ಸಮಸ್ಯೆ ಪರಿಹಾರಕ್ಕೆ, ನಿಗಮ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ ಎಂದರು.

<><><>

ಜಿ. ಪಲ್ಲವಿ ಧ್ವನಿ 55 ಸೆಕೆಂದುಗಳು

<><><>

ಹಾವೇರಿ ಜಿಲ್ಲೆ, ರಾಣಿಬೆನ್ನೂರಿನ ಐರಣಿ ಗ್ರಾಮದ, ಆಶಾ ಕಾರ್ಯಕರ್ತೆ ಗಂಗಮ್ಮ ಮಹೇಶಪ್ಪ ಲಗುಬಿಗಿ ತಮ್ಮ ಗೃಹಲಕ್ಷ್ಮೀ ಹಣ ಕೂಡಿಟ್ಟು, ತಮ್ಮೂರಿನ ಸರ್ಕಾರಿ ಶಾಲೆಗೆ, 24 ಸಾವಿರ ರೂಪಾಯಿ ದೇಣಿಗೆ ನೀಡಿರುವುದನ್ನು ಅಭಿನಂದಿಸಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಎಕ್ಸ್ ಮಾಧ್ಯಮದಲ್ಲಿ, ದಂಪತಿಯನ್ನು ಶ್ಲಾಘಿಸಿದ್ದಾರೆ. ಸಾಮಾಜಿಕ ಭದ್ರತಾ ಯೋಜನೆ ಫಲಾನುಭವಿಗಳ ಇಂತಹ ಕಾರ್ಯ ಸಮಾಜಕ್ಕೆ ಮಾದರಿ ಎಂದು ಅವರು ಬಣ್ಣಿಸಿದ್ದಾರೆ. ಗಂಗಮ್ಮ ಅವರು ದೇಣಿಗೆಯಾಗಿ ನೀಡಿದ, ಗೃಹಲಕ್ಷ್ಮೀ ಯೋಜನೆಯ ಹಣ ಬಳಸಿ, ಶಾಲೆಯ ಮಕ್ಕಳಿಗಾಗಿ, ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಸಲಾಗಿದೆ.

<><><>

'ಸೀ ಸ್ಕೌಟಿಂಗ್ ಕೇಂದ್ರ' ಮುಂಬೈನಿಂದ, ಮಂಗಳೂರಿಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್.ಸಿಂಧ್ಯಾ ತಿಳಿಸಿದ್ದಾರೆ. ಮಂಗಳೂರಿನ ಪಿಲಿಕುಳ ನಿಸರ್ಗಧಾಮದಲ್ಲಿ ನಿರ್ಮಾಣಗೊಂಡ, ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ತರಬೇತಿ ಕೇಂದ್ರದ ನೂತನ ಸಭಾಭವನದ, ಲೋಕಾರ್ಪಣೆ ಸಮಾರಂಭದಲ್ಲಿ, ಅವರು ಮಾತನಾಡಿದರು. ಸ್ಕೌಟ್ ಗೈಡ್ಸ್‌ನಲ್ಲಿ ಸೀ ಸ್ಕೌಟ್ ವಿಭಾಗವಿದ್ದು, ಕರಾವಳಿ ಜಿಲ್ಲೆ ಮಂಗಳೂರಿಗೆ ಸ್ಥಳಾಂತರಿಸುವುದರಿಂದ, ರಾಜ್ಯದ ಮಕ್ಕಳ ತರಬೇತಿಗೆ ಅನುಕೂಲವಾಗಲಿದೆ ಎಂದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಅವರ ಕುಟುಂಬದ ಸದಸ್ಯರ ವಿರುದ್ಧದ, ಮುಡಾ ನಿವೇಶನ ಅಕ್ರಮ ಹಂಚಿಕೆ ಪ್ರಕರಣದ ತನಿಖೆಯನ್ನು, ಸಿ.ಬಿ.ಐ.ಗೆ ವಹಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿ ಹಾಗೂ ತಮ್ಮ ವಿರುದ್ಧದ ಪೋಕ್ಸೋ ಪ್ರಕರಣ ರದ್ದು ಕೋರಿ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸಲ್ಲಿಸಿರುವ ಅರ್ಜಿಗಳ ಕುರಿತು, ಧಾರವಾಡ ಉಚ್ಚ ನ್ಯಾಯಾಲಯ ಇಂದು ತೀರ್ಪು ಪ್ರಕಟಿಸಲಿದೆ. ಎರಡೂ ಪ್ರಕರಣಗಳ ವಿಚಾರಣೆ ಪೂರ್ಣಗೊಳಿಸಿ, ತೀರ್ಪು ಕಾಯ್ದಿರಿಸಿರುವ, ನ್ಯಾಯಮೂರ್ತಿ ಎಂ. ನಾಗಪ್ರಸನ್ನ, ಏಕಸದಸ್ಯ ಪೀಠ, ತೀರ್ಪು ಪ್ರಕಟಿಸಲಿದೆ ಎಂದು ಹಲವು ಸುದ್ದಿ ಸಂಸ್ಥೆಗಳು ವರದಿ ಮಾಡಿವೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ x ಖಾತೆ @airnews_dharwad ಹಾಗೂ

ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.

<><><>

ಚೇತರಿಕೆಯ ಭರವಸೆಯಿಲ್ಲದ ರೋಗಿ, ಘನತೆಯಿಂದ ಮರಣ ಹೊಂದುವ, ದಯಾ ಮರಣದ ಹಕ್ಕಿನ ಕುರಿತು, ಸರ್ವೋಚ್ಚ ನ್ಯಾಯಾಲಯ ಹೊರಡಿಸಿರುವ ನಿರ್ದೇಶನವನ್ನು, ರಾಜ್ಯ ಆರೋಗ್ಯ ಇಲಾಖೆ ಜಾರಿಗೊಳಿಸಿದೆ. 'ಅಡ್ವಾನ್ಸ್ ಮೆಡಿಕಲ್ ಡೈರೆಕ್ಟಿವ್' ಅಥವಾ 'ಲಿವಿಂಗ್ ವಿಲ್' ಯೋಜನೆ ಈಗ ರಾಜ್ಯದಲ್ಲಿ ಜಾರಿಗೊಂಡಿದೆ.

<><><>

ಧಾರವಾಡ ಜಿಲ್ಲಾ ಆರೋಗ್ಯಾಧಿಕಾರಿ, ಡಾಕ್ಟರ್ ಶಶಿ ಪಾಟೀಲ, ಪ್ರದೇಶ ಸಮಾಚಾರಕ್ಕಾಗಿ, ದಯಾ ಮರಣ ಮತ್ತು ಅಂಗಾಂಗ ದಾನದ ಬಗ್ಗೆ, ಮಾಹಿತಿ ನೀಡಿದ್ದಾರೆ.

<><><>

ಡಾ. ಶಶಿ ಪಾಟೀಲ ಧ್ವನಿ 50 ಸೆಕೆಂದುಗಳು

<><><>

ಉತ್ತರಕನ್ನಡ ಜಿಲ್ಲೆ, ಶಿರೂರಿನಲ್ಲಿ ಪ್ರಸಕ್ತ ಮಳೆಗಾಲದಲ್ಲಿ, ಪುನಃ ಗುಡ್ಡ ಕುಸಿದು ಅನಾಹುತವಾಗದಂತೆ, ಎಲ್ಲ ಅಗತ್ಯ ಮುನ್ನೆಚ್ಚರಿಕೆ ಕ್ರಮ ತಕ್ಷಣದಿಂದಲೇ ಕೈಗೊಳ್ಳುವಂತೆ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ, ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ನಿರ್ದೇಶಿಸಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಜಿಲ್ಲಾ ರಸ್ತೆ ಸುರಕ್ಷಾ ಪ್ರಾಧಿಕಾರದ, ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು. ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ಮತ್ತು ಗುರುತಿಸಲಾಗಿರುವ ರಾಜ್ಯ ಹೆದ್ದಾರಿಯ, ಬ್ಲ್ಯಾಕ್ ಸ್ಪಾಟ್‌ಗಳಲ್ಲಿ, ತುರ್ತು ಸಂದರ್ಭದಲ್ಲಿ ಮೊಬೈಲ್ ಮೂಲಕ ಸಂಪರ್ಕಿಸಲು ಅನುಕೂಲವಾಗುವಂತೆ, ಟಾವರ್‌ಗಳನ್ನು ಅಳವಡಿಸುವಂತೆ, ಬಿ.ಎಸ್.ಎನ್.ಎಲ್. ಅಧಿಕಾರಿಗಳಿಗೆ ಸೂಚಿಸಿದರು. ಬ್ಲ್ಯಾಕ್ ಸ್ಪಾಟ್ ಗಳಲ್ಲಿ ಅಪಘಾತ ಸೂಚನಾ ಫಲಕ, ರಾತ್ರಿ ವೇಳೆ ಬೆಳಕಿನ ವ್ಯವಸ್ಥೆ ಮತ್ತು ತುರ್ತು ಸಹಾಯವಾಣಿ ಸಂಖ್ಯೆಗಳ ವಿವರ ಪ್ರದರ್ಶಿಸಲು, ಜಿಲ್ಲಾಧಿಕಾರಿ ಆದೇಶಿಸಿದರು.

<><><>

ರಾಜ್ಯ ವಿಶೇಷಚೇತನರ ಕ್ರೀಡಾ ಸಂಸ್ಥೆ, ಮೈಸೂರಿನಲ್ಲಿ ಆಯೋಜಿಸಿದ್ದ, 33ನೇ ರಾಜ್ಯ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್‌ನಲ್ಲಿ ಭಾಗವಹಿಸಿದ್ದ, ಕೊಪ್ಪಳ ತಾಲೂಕು ಬೆಟಗೇರಿಯ ಶಿವಕುಮಾರ ಕೋಮಲಾಪುರ, ಉದ್ದ ಜಿಗಿತ ಹಾಗೂ ಜಾವೆಲಿನ್ ಥ್ರೋ ಸ್ಪರ್ಧೆಗಳಲ್ಲಿ ಚಿನ್ನದ ಪದಕ ಗಳಿಸಿದ್ದಾರೆ. 24 ರಾಷ್ಟ್ರೀಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಪಾಲ್ಗೊಳ್ಳಲು ಅರ್ಹತೆ ಗಳಿಸಿರುವ ಶಿವಕುಮಾರ, ಸದ್ಯ ಶಿವಮೊಗ್ಗದಲ್ಲಿ ಪಶು ವೈದ್ಯಕೀಯ ವಿಷಯದಲ್ಲಿ, ಬಿ.ಎಸ್.ಸಿ. ಪದವಿ ವ್ಯಾಸಂಗ ನಿರತರು. ಪ್ರದೇಶ ಸಮಾಚಾರಕ್ಕಾಗಿ ಅವರು, ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಶಿವಕುಮಾರ ಕೋಮಲಾಪುರ ಧ್ವನಿ 18 ಸೆಕೆಂದುಗಳು

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ, 'ಪರೀಕ್ಷಾ ಪೇ ಚರ್ಚಾ', ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ, ಇದೇ 10 ರಂದು ಬೆಳಗ್ಗೆ 11 ಗಂಟೆಗೆ ಜರುಗಲಿದೆ.

<><><>

ಸಂಭಾವ್ಯ ಅಪಘಾತ ತಡೆಯಲು ಹಾಗೂ ಪ್ರಯಾಣಿಕರ ಸುರಕ್ಷೆಗಾಗಿ, ರಾಜ್ಯದ ಮೂರು ವಲಯಗಳ, ಒಟ್ಟು 3 ಸಾವಿರದ 692 ಕಿಲೋ ಮೀಟರ್ ರೈಲ್ವೆ ಮಾರ್ಗಗಳಲ್ಲಿ, ಅತ್ಯಾಧುನಿಕ 'ಕವಚ್ ವ್ಯವಸ್ಥೆ' ಅಳವಡಿಸಲಾಗುತ್ತಿದೆ ಎಂದು, ಕೇಂದ್ರ ರೈಲ್ವೆ ಖಾತೆ, ರಾಜ್ಯ ಸಚಿವ, ವಿ.ಸೋಮಣ್ಣ ತಿಳಿಸಿದ್ದಾರೆ.

<><><>

ಹೆಸರಾಂತ ನಾಟಿ ವೈದ್ಯ ಎಂ.ಬಿ. ಶಿವಣ್ಣಗೌಡ, ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲೂಕು, ಕೋಣಂದೂರಿನ ರಾಮನಸರ ಮಂಗಳದಲ್ಲಿ, ವಯೋಸಹಜ ಕಾಯಿಲೆಯಿಂದ ನಿನ್ನೆ ನಿಧನರಾದರು.

<><><>

ಮೈಕ್ರೋ ಫೈನಾನ್ಸ್ ನಿಂದ ಸಾಲ ಪಡೆದಿದ್ದ, ತಾಯಿ, ಮಗ ಆತ್ಮಹತ್ಯೆ ಮಾಡಿಕೊಂಡ, ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ, ಕೊನ್ನಾಪುರ ಗ್ರಾಮಕ್ಕೆ ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ ಭೇಟಿ ನೀಡಿ, ಕುಟುಂಬದವರಿಗೆ ಸಾಂತ್ವನ ಹೇಳಿದರು.

<><><>

ಶಿವಮೊಗ್ಗದಲ್ಲಿ ಏಪ್ರಿಲ್ ತಿಂಗಳ 19 ಮತ್ತು 20 ರಂದು, ಕಂಬಳ ಆಯೋಜಿಸಲಾಗುತ್ತಿದೆ ಎಂದು ಮಲೆನಾಡು ತುಂಗಭದ್ರಾ ಜೋಡುಕರೆ ಕಂಬಳ ಸಮಿತಿ ಅಧ್ಯಕ್ಷ, ಮುಚ್ಚೂರು ಕಲ್ಕುಡೆ ಲೋಕೇಶ್ ಶೆಟ್ಟಿ ತಿಳಿಸಿದ್ದಾರೆ.

<><><>

ಸಹಕಾರ ಇಲಾಖೆ, 'ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆ' ಅಡಿ, ಹೊಸದಾಗಿ ಸದಸ್ಯರನ್ನು ನೊಂದಾಯಿಸಲು ಹಾಗೂ ಸದಸ್ಯತ್ವ ನವೀಕರಿಸಲು, ಬರುವ ಮಾರ್ಚ್ 31ರ ವರೆಗೆ ಅವಕಾಶವಿದೆ ಎಂದು, ಗದಗ ಜಿಲ್ಲಾ ಸಹಕಾರ ಉಪ ನಿಬಂಧಕರು ತಿಳಿಸಿದ್ದಾರೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಬಡತನ ನಿರ್ಮೂಲನೆಯಿಂದ, ಬಾಲ್ಯ ವಿವಾಹ ಪಿಡುಗಿನ ಮೂಲೋತ್ಪಾಟನೆ ಸಾಧ್ಯ; ರಾಜ್ಯ ಮಹಿಳಾ ಆಯೋಗ.
- ರಾಜ್ಯದ ಅಲೆಮಾರಿ ಜನಾಂಗಗಳ ಸ್ಥಿತಿ, ಗತಿ; ಮಾರ್ಚ್ 12ರೊಳಗೆ ನಿಗಮದಿಂದ, ಅಧ್ಯಯನ ವರದಿ ಸಲ್ಲಿಕೆ.
- ಮುಂಬೈ 'ಸೀ ಸ್ಕೌಟಿಂಗ್ ಕೇಂದ್ರ'ವನ್ನು, ಮಂಗಳೂರಿಗೆ ಸ್ಥಳಾಂತರಿಸಲು, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಚಿಂತನೆ.
- ಉತ್ತರಕನ್ನಡ ಜಿಲ್ಲೆ ಶಿರೂರಿನಲ್ಲಿ, ಪುನಃ ಮಳೆಗಾಲದಲ್ಲಿ ಗುಡ್ಡ ಕುಸಿಯದಂತೆ, ಜಿಲ್ಲಾಡಳಿತದಿಂದ ಕ್ರಮ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

<><><>